**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 713/2023**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.08**

**ದಿನಾಂಕಃ 14.11.2025** **ಸಿಡಬ್ಲ್ಯೂ.12**

| | |
|---|---|
| ಹೆಸರು | ರವಿಕುಮಾರ ಡಿ |
| ತಂದೆ ಹೆಸರು | ಡಿಳ್ಳೆಪ್ಪ |
| ವಯಸ್ಸು | 35 ವರ್ಷ |
| ಉದ್ಯೋಗ | ಪಿ ಎಸ್ ಐ |
| ವಾಸ ಸ್ಥಳ | ಹಾವೇರಿ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನಾನು ದಿಃ 19.08.2021 ರಿಂದ 2023 ರ ಜನೇವರಿ ವರೆಗೆ ಪಿ ಎಸ್ ಐ ಆಗಿ ಮಲೆಬೆನ್ನೂರು ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 27.10.2021 ರಂದು ಪ್ರಕರಣದ ಕಡತವನ್ನು ಚಾಸಾ.11 ರವರಿಂದ ಪಡೆದುಕೊಂಡು ಅದೇ ದಿನ ಚಾಸಾ. 4 ರಿಂದ 6 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಅದೇ ದಿನ ಆರೋಪಿತರಿಗೆ ನೋಟಿಸ್ ಜಾರಿ ಮಾಡಲು ಕಳುಹಿಸಿರುತ್ತೇನೆ. 1 ನೇ ಆರೋಪಿ ನೋಟಿಸ್ ನ್ನು ತಿರಸ್ಕರಿಸಿದ್ದರಿಂದ ಆತನ ವಿರುದ್ಧ ದಸ್ತಗಿರಿ ಕ್ರಮ ಅನುಸರಿಸಿ ಮಾನ್ಯ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಅದೇ ದಿನ ಚಾಸಾ.1 ರವರ 164 ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ.

ದಿಃ 27.12.2021 ರಂದು ಗಾಯಾಳು ಚಾಸಾ. 4 ರವರ ಗಾಯದ ಪ್ರಮಾಣ ಪತ್ರ ಪಡೆದಿರುತ್ತೇನೆ. ಸಾಕ್ಷಿಯು ಗುರುತಿಸಿದ ಗಾಯದ ಪ್ರಮಾಣ ಪತ್ರವನ್ನು ಈಗಾಗಲೇ ನಿಪಿ.9 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.9 (ಬಿ) ಎಂದು ಗುರುತಿಸಲಾಯಿತು. ಅದೇ ದಿನ ಘಟನಾ ಸ್ಥಳದ ದಾಖಲೆಯನ್ನು ಪುರಸಭೆಯವರಿಂದ ಪಡೆದುಕೊಂಡಿರುತ್ತೇನೆ. ಸಾಕ್ಷಿಯು ಗುರುತಿಸಿದ ದಾಖಲೆಯನ್ನು ನಿಪಿ.10 ಎಂದು ಸಾಕ್ಷಿಯ ಸಹಿಯನ್ನು ನಿಪಿ.10 (ಎ) ಎಂದು ಗುರುತಿಸಲಾಯಿತು.

ದಿಃ 28.07.2022 ರಂದು 2 ಮತ್ತು 3 ಆರೋಪಿತರು ನ್ಯಾಯಾಲಯದಿಂದ ಜಾಮೀನು ಪಡೆದು ಅದನ್ನು ಹಾಜರುಪಡಿಸಿದ್ದು ಅವರನ್ನು ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ.

ದಿಃ 15.12.2022 ರಂದು ಆರೋಪಿತರ ವಿರುದ್ದ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿರುತ್ತೇನೆ. ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ. 1 ನೇ ಆರೋಪಿ ಈಗ ನ್ಯಾಯಾಲಯದಲ್ಲಿ ಇದ್ದಾರೆ. ಈ ದಿನ 2 ಮತ್ತು 3 ನೇ ಆರೋಪಿತರು ಗೈರುಹಾಜರಿದ್ದು ಆರೋಪಿ ಪರ ವಕೀಲರು ಅವರ ಗುರುತಿಸುವಿಕೆ ಬಗ್ಗೆ ಯಾವುದೇ ಆಕ್ಷೇಪಣೆ ಇಲ್ಲ ಎಂದು ಹೇಳಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ನಾನು ಚಾಸಾ.4 ರಿಂದ 6 ರವರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಗಾಯದ ಪ್ರಮಾಣ ಪತ್ರವನ್ನು ಪಡೆದಿಲ್ಲ ಹಾಗೂ ಚಾಸಾ.1 ರವರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ ಘಟನಾ ಸ್ಥಳದ ದಾಖಲೆಗಳನ್ನು ಪಡೆದಿಲ್ಲ. ಆರೋಪಿತರು ಯಾವುದೇ ತಪ್ಪು ಮಾಡದಿದ್ದರೂ ಸುಳ್ಳು ತನಿಖೆ ಪೂರೈಸಿ ಸುಳ್ಳು ದೋಷಾರೋಪಣ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ